## ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಸುನೀಲ್ ವಲ್ಯಾಪುರ್ ರವರು ನಿಯಮ 330 ನೇ ಮೇರೆಗಿನ ಗಮನ ಸೆಳೆಯುವ ಸೂಚನೆಗೆ ಉತ್ತರ.

### ಸೂಚನೆ

ಕಲಬುರ್ಗಿ ನಗರದ ಸಂತ್ರಸವಾಡಿಯಲ್ಲಿನ ಡಾ|| ಬಿ.ಆರ್.ಅಂಬೇಡ್ಕರ್ ವಸತಿ ಶಾಲೆಯ ಮಕ್ಕಳಿಗೆ ಹಾಸ್ಟೆಲ್ ಸಿಬ್ಬಂದಿಗಳು ಸರಿಯಾದ ಊಟ ಕೊಡುತ್ತಿಲ್ಲದಿರುವ ಬಗ್ಗೆ ಸದನದಲ್ಲಿ ಪ್ರಸ್ತಾಪಿಸ ಬಯಸುತ್ತೇನೆ.

### ಉತ್ತರ

ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಕಲಬುರಗಿ ಜಿಲ್ಲೆಯ, ಕಲಬುರಗಿ ತಾಲ್ಲೂಕಿನ ಸಂತ್ರಸ್ಥವಾಡಿಯಲ್ಲಿ ಡಾ|| ಬಿ.ಆರ್.ಅಂಬೇಡ್ಕರ್ ವಸತಿ ಶಾಲೆಗಳನ್ನು ನಿರ್ವಹಣೆ ಮಾಡಲಾಗುತ್ತಿದ್ದು, 2023-24ನೇ ಸಾಲಿಗೆ 69 ಬಾಲಕರು ಹಾಗೂ 47 ಬಾಲಕಿಯರು ಸೇರಿದಂತೆ, ಒಟ್ಟಾರೆ 116 ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲಾಗಿರುತ್ತದೆ.

ಸದರಿ ವಸತಿ ಶಾಲೆಯಲ್ಲಿ ಹಾಸ್ಟೆಲ್ ಸಿಬ್ಬಂದಿಗಳು ಉತ್ತಮವಾದ ಆಹಾರವನ್ನು ನೀಡದಿರುವ ಬಗ್ಗೆ ವಿಚಾರ ತಿಳಿದು ಸಹಾಯಕ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ, ಕಲಬುರ್ಗಿ ರವರು ದಿನಾಂಕ:14-02-2024 ರಂದು ಭೇಟಿ ನೀಡಿದ್ದು, ಮೆನು ಚಾರ್ಟ್ ಪ್ರಕಾರ ಆಹಾರವನ್ನು ಕೊಡುತ್ತಿರುವುದಾಗಿ ವರದಿ ನೀಡಿರುತ್ತಾರೆ.

ಇಲಾಖೆ ವಿದ್ಯಾರ್ಥಿನಿಲಯಗಳಲ್ಲಿನ ಗುಣಮಟ್ಟವನ್ನು ಅಭಿವೃದ್ಧಿಪಡಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ.

1. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಸುತ್ತೋಲೆ ಸಂಖ್ಯೆ:SWD/EDU/ED7/20/2023/1065640, ದಿನಾಂಕ:07-10-2023ರಲ್ಲಿ ಗುತ್ತಿಗೆದಾರರು ಸರಬರಾಜು ಮಾಡುವ ಆಹಾರ ಪದಾರ್ಥಗಳ ಮಾದರಿಗಳನ್ನು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಕಛೇರಿಗಳಲ್ಲಿ ಪ್ರದರ್ಶಿಸಲು ಸುತ್ತೋಲೆ ಹೊರಡಿಸಲಾಗಿರುತ್ತದೆ.

2. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: 198 ಆರ್ & ಐ 2022, ದಿನಾಂಕ: 21-12-2023 ರನ್ವಯ ಪ್ರತಿ ಜಿಲ್ಲೆಗೂ ರಾಜ್ಯ ಮಟ್ಟದ ಅಧಿಕಾರಿಗಳನ್ನು ನೋಡಲ್ ಅಧಿಕಾರಿಗಳನ್ನಾಗಿ ನಿಯೋಜನೆ ಮಾಡಲಾಗಿರುತ್ತದೆ.

3. ಸರ್ಕಾರದ ಆದೇಶ ಸಂಖ್ಯೆ SWD/EDU/ED4/80/2023 C-1161067 ದಿನಾಂಕ:15-09-2023 ರಲ್ಲಿ ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ ವಿದ್ಯಾರ್ಥಿ ನಿಲಯಗಳಿಗೆ ಉಪ ವಿಭಾಗಾಧಿಕಾರಿಗಳು ಪ್ರತಿ ಮಾಹೆಯಲ್ಲಿ ಕನಿಷ್ಠ ಒಂದು ಬಾರಿ ಹಾಗೂ ತಾಲ್ಲೂಕಿನ ತಹಶೀಲ್ದಾರ್‌ರು ಪ್ರತಿ ಮಾಹೆಯಲ್ಲಿ ಕನಿಷ್ಠ 2 ಬಾರಿ ಅನಿರೀಕ್ಷಿತ ಭೇಟಿ ನೀಡಿ ವರದಿ ಮಾಡುವಂತೆ ಆದೇಶಿಸಿದೆ.

4. ಜಿಲ್ಲಾ ಮಟ್ಟದ ಅಧಿಕಾರಿಗಳು ಖುದ್ದು ಭೇಟಿ ನೀಡಿ ರುಚಿ/ಸಾಧಾರಣ ರುಚಿ ಹೊಂದಿರುವ ನಿಲಯಗಳಿಗೆ ಭೇಟಿ ನೀಡಿದ ಸಮಯದಲ್ಲಿ Taste Register ನಲ್ಲಿ ನಮೂದಿಸಿ, ಕೇಂದ್ರ ಕಛೇರಿಗೆ ವರದಿ ಮಾಡಲು ದಿನಾಂಕ:19-09-2023 ರಂದು ಸುತ್ತೋಲೆ ಹೊರಡಿಸಲಾಗಿದೆ.

---2

5. ವಸತಿ ಶಾಲೆ ಮತ್ತು ವಿದ್ಯಾರ್ಥಿನಿಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಡುಗೆ ಸಿಬ್ಬಂದಿಗೆ ಆಹಾರ ತಯಾರಿಕೆ ಹಾಗೂ ಶುಚಿತ್ವ ಕಾಪಾಡುವ ಬಗ್ಗೆ ಜಿಲ್ಲಾ ಹಂತದಲ್ಲಿ ತರಬೇತಿ ನೀಡಲು ಆದೇಶ ಹೊರಡಿಸಲಾಗಿರುತ್ತದೆ.

6. ಮುಂದುವರೆದು, ಪಡಿತರ ಆಹಾರ ಧಾನ್ಯಗಳನ್ನು ಮಾಹೆಯಾನ ಎತ್ತುವಳಿ ಮಾಡಿ ಸದರಿ ಎತ್ತುವಳಿಯಾದ ಆಹಾರ ಪದಾರ್ಥಗಳನ್ನು ಸ್ವಚ್ಛಗೊಳಿಸಿ ದಾಸ್ತಾನು ಕೊಠಡಿಯಲ್ಲಿ ಸುರಕ್ಷಿತವಾಗಿ ಶೇಖರಿಸಿಡುವಂತೆಯೂ ಸಹ ಸುತ್ತೋಲೆಯನ್ನು ಹೊರಡಿಸಲಾಗಿರುತ್ತದೆ.

ಸಮಾಜ ಕಲ್ಯಾಣ ಇಲಾಖೆ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆ ಹಾಗೂ ವಿದ್ಯಾರ್ಥಿ ನಿಲಯಗಳನ್ನು ಸಮರ್ಪಕವಾಗಿ ನಿರ್ವಹಣೆ ಮಾಡುವ ಬಗ್ಗೆ ಹಾಗೂ ವಿದ್ಯಾರ್ಥಿ ನಿಲಯಗಳಲ್ಲಿ ದಾಖಲಾಗುವ ವಿದ್ಯಾರ್ಥಿಗಳಿಗೆ ಎಲ್ಲಾ ಉತ್ತಮ ಪೌಷ್ಠಿಕವಾದ ಹಾಗೂ ಶುಚಿ-ರುಚಿಯಾದ ಆಹಾರವನ್ನು ಒದಗಿಸಲು ಹಾಗೂ ಎಲ್ಲಾ ರೀತಿಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ.

**ಸಕಇ 97 ಎಸ್‌ಎಲ್‌ಪಿ 2024**

**(ಡಾ: ಹೆಚ್.ಸಿ.ಮಹದೇವಪ್ಪ)**
**ಸಮಾಜ ಕಲ್ಯಾಣ ಸಚಿವರು**